ಕರ್ನಾಟಕ ಸರ್ಕಾರ

**ಸಂಖ್ಯೆ:** ಡಿಟಿಇ 513 ಎಸಿಎಂ(2) 2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:11-06-2018.

**-:: ಸುತ್ತೋಲೆ ::-**

**ವಿಷಯ:** 2018-19ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ **ಪ್ರಥಮ ಸಂಜೆ ಡಿಪ್ಲೋಮಾ** ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಜಿಗಳನ್ನು ನೀಡುವ ಮತ್ತು ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕ ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:26-05-2018.
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:08-05-2018.
3. ಪ್ರಾಂಶುಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಇಪಿ/01/ಪ್ರವೇಶ/2018, ದಿ:08-06-2018.

-00000000-

2018-19ನೇ ಸಾಲಿನ ಪ್ರಥಮ **ಸಂಜೆ** ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರ ಈ ಕಛೇರಿ ಸುತ್ತೋಲೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ **ದಿನಾಂಕವನ್ನು 09-06-2018** ಎಂದು ನಿಗಧಿಪಡಿಸಲಾಗಿತ್ತು.

ಉಲ್ಲೇಖ(2)ರ ಪ್ರಿನ್ಸಿಪಾಲರ ಪತ್ರದಲ್ಲಿ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಈ ಕೆಳಕಂಡಂತೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

1. **ಅರ್ಜಿ ಪಡೆಯಲು ವಿಸ್ತರಿಸಲಾದ ದಿ:30-06-2018ರ ಸಂಜೆ 5:00 ಗಂಟೆಯವರೆಗೆ**
2. **ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸುವ ದಿ:30-06-2018ರ ಸಂಜೆ 7:30 ಗಂಟೆಯೊಳಗೆ**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:07-07-2018** ರೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. **ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

ನಿರ್ದೇಶಕರು

11/06

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು

ಸೀಟು ಆಯ್ಕೆ ಪ್ರಕ್ರಿಯೆಯನ್ನು ತಮ್ಮ ಸಂಸ್ಥೆಗಳಲ್ಲಿಯೇ ನಡೆಸುವ ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ನಿರ್ದೇಶನಾಲಯಕ್ಕೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಗಳಲಯೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು.

<u>ಪ್ರತಿ ಮಾಹಿತಿಗಾಗಿ:–</u>

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
2. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶಕರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿವಿಪಿ(2) ವಿಭಾಗಕ್ಕೆ.
7. ಕಛೇರಿ ಪ್ರತಿ.